### ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1335 |
| ಸದಸ್ಯರ ಹೆಸರು | ಶ್ರೀ ಎಂ. ನಾಗರಾಜು |
| ಉತ್ತರಿಸುವ ದಿನಾಂಕ | 19.03.2025 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ದೇವನಹಳ್ಳಿ ಪಟ್ಟಣದ ಕೋಟೆಯಲ್ಲಿರುವ ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನವು ಪುರಾತನ ಕಾಲದಲ್ಲಿ ಸ್ಥಾಪಿತವಾಗಿದ್ದು, ಈ ದೇವಸ್ಥಾನವು ಮುಜರಾಯಿ ಇಲಾಖೆಯ ವ್ಯಾಪ್ತಿಗೆ ಒಳಪಟ್ಟಿದ್ದು ಇಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ದೇವನಹಳ್ಳಿ ಪಟ್ಟಣದ ಕೋಟೆಯಲ್ಲಿರುವ ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನವು 'ಸಿ' ವರ್ಗದ ಅಧಿಸೂಚಿತ ಸಂಸ್ಥೆಯಾಗಿದ್ದು, ಈ ದೇವಾಲಯವು ರಾಜ್ಯ ಪುರಾತತ್ವ ಇಲಾಖೆಗೆ ಒಳಪಟ್ಟಿರುತ್ತದೆ.<br><br>ಈ ದೇವಾಲಯಕ್ಕೆ ಭದ್ರತೆ ಹಿತದೃಷ್ಟಿಯಿಂದ CCTV ಅಳವಡಿಸಲಾಗಿರುತ್ತದೆ. ದೇವಾಲಯಕ್ಕೆ ಬರುವ ಭಕ್ತಾದಿಗಳಿಗೆ ಕೈಕಾಲು ತೊಳೆಯಲು ನೀರಿನ ವ್ಯವಸ್ಥೆ ಇರುತ್ತದೆ ಮತ್ತು ಭಕ್ತಾದಿಗಳಿಗೆ ದೇವಾಲಯದಲ್ಲಿ ಕುಳಿತುಕೊಳ್ಳುವ ವ್ಯವಸ್ಥೆಯು ಸಹ ಇರುತ್ತದೆ.<br><br>ಶ್ರಾವಣ ಮಾಸದಲ್ಲಿ ಬ್ರಹ್ಮ ರಥೋತ್ಸವ ಕಾರ್ಯಕ್ರಮ ಹಾಗೂ ಇತರೆ ವಿಶೇಷ ದಿನಗಳಂದು ಅಪಾರ |
| ಆ) | ಈ ದೇವಸ್ಥಾನಕ್ಕೆ ಅಪಾರ ಸಂಖ್ಯೆಯಲ್ಲಿ ಭಕ್ತಾದಿಗಳು ದಿನನಿತ್ಯ ಭೇಟಿ ನೀಡುತ್ತಿದ್ದು ಹಾಗೂ ಈ ದೇವಸ್ಥಾನವು ಒಂದು ಪ್ರೇಕ್ಷಣೀಯ ಸ್ಥಳವೂ ಕೂಡ ಆಗಿದ್ದು ಸಾರ್ವಜನಿಕರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಸಂಖ್ಯೆಯಲ್ಲಿ ಭಕ್ತಾದಿಗಳು ಭೇಟಿ ನೀಡುವುದರಿಂದ ಸದರಿ ದಿನಗಳಂದು ದೇವಾಲಯಕ್ಕೆ ಆಗಮಿಸುವ ಭಕ್ತಾದಿಗಳಿಗೆ ಅನ್ನ ದಾಸೋಹ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ. |
| ಇ) | ಮುಜರಾಯಿ ಇಲಾಖೆಯಿಂದ ಸದರಿ ದೇವಸ್ಥಾನಕ್ಕೆ ಒದಗಿಸಲಾಗುತ್ತಿರುವ ಅನುದಾನವೆಷ್ಟು? (ಮಾಹಿತಿ ನೀಡುವುದು) | ಧಾರ್ಮಿಕ ದತ್ತಿ ಇಲಾಖಾ ವತಿಯಿಂದ ಸದರಿ ದೇವಾಲಯಕ್ಕೆ ಯಾವುದೇ ಅನುದಾನ ಮಂಜೂರು ಮಾಡಿರುವುದಿಲ್ಲ. |

ಸಂಖ್ಯೆ: ಕಂಇ 78 ಮುಸಪ್ರ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು